## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಜಿ.ಎನ್.ಪ್ರಕಾಶ್ ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಪ್ರಲ್ಹಾದ್‌ರಾವ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಮಾನ್ವಿ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಮಾನ್ಯ ಉಪಲೋಕಾಯುಕ್ತರ ಕಲಂ 12(3) ರ ವರದಿ-ವಿವರವಾದ ಇಲಾಖೆ ವಿಚಾರಣೆಗೆ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ- ಆದೇಶ.

**ಓದಲಾಗಿದೆ:**

| | |
|---|---|
| 1. | ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಅ.ಸ.ಪ.ಸಂಖ್ಯೆ:ಕಂಪ್ಲೇಟ್/ಉಪಲೋಕ್/ಜಿಎಲ್‌ಬಿ-751 /2016/ ಎಆರ್‌ಇ-5, ದಿನಾಂಕ:07.2.2017. |
| 2. | ಮಾನ್ಯ ಉಪ ಲೋಕಾಯುಕ್ತರವರ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ವರದಿ ಸಂಖ್ಯೆ: ಕಂಪ್ಲೇಟ್/ಉಪಲೋಕ್/ಜಿಎಲ್‌ಬಿ-751 /2016/ ಎಆರ್‌ಇ-5, ದಿನಾಂಕ:03.2.2017. |

**ಪ್ರಸ್ತಾವನೆ:-**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ದಿನಾಂಕ:07.2.2017 ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪ ಲೋಕಯುಕ್ತ-1ರವರ ದಿನಾಂಕ:3.2.2017 ರ ಲೋಕಾಯುಕ್ತ ಕಾಯ್ದೆಯ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪ ಲೋಕಾಯುಕ್ತರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪ ಲೋಕಾಯುಕ್ತರವರ ವರದಿ ಹಾಗೂ ಸದರಿ ವರದಿಗೆ ಲಗತ್ತಿಸಿರುವ ತನಿಖಾ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಶ್ರೀ ರಾಮು ನಿರಾಮನ್ವಿ, ಮಾನ್ವಿ ಇವರು ಲೋಕಾಯುಕ್ತ ಕಛೇರಿಗೆ ದೂರನ್ನು ಸಲ್ಲಿಸಿ, ಎನ್.ಆರ್.ಡಿ.ಡಬ್ಲ್ಯೂ.ಪಿ ಯೋಜನೆಯಡಿ 2010-16 ನೇ ಸಾಲಿನಲ್ಲಿ ಕೈಗೊಳ್ಳಲಾದ ಕಾಮಗಾರಿಗಳಿಗೆ ಟೆಂಡರ್ ಕರೆದಿರುವುದಿಲ್ಲವೆಂದು, ನಿರ್ವಹಿಸಿದ ಕಾಮಗಾರಿಗಳು ಕಳಪೆಯಾಗಿರುತ್ತವೆ ಎಂದು ಆರೋಪಿಸಿ, (1) ಶ್ರೀ ಜಿ.ಎನ್.ಪ್ರಕಾಶ್, ಸ.ಕಾ.ಇಂ (2) ಶ್ರೀ ಕುಮಾರಸ್ವಾಮಿ, ಸ.ಕಾ.ಇಂ ಮತ್ತು (3) ಶ್ರೀ ಪ್ರಲ್ಹಾದ್‌ರಾವ್ ಕಿರಿಯ ಇಂಜಿನಿಯರ್ ಇವರುಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಸದರಿ ದೂರಿನ ಕುರಿತು ಮಾನ್ಯ ಉಪಲೋಕಾಯುಕ್ತರು ಕಲಂ 9 ರನ್ವಯ ತನಿಖೆ ಕೈಗೊಂಡಿದ್ದು, ಮೂವರು ಆರೋಪಿತರಿಂದ ಹೇಳಿಕೆ ಪಡೆದಿರುತ್ತಾರೆ. ಶ್ರೀ ಜಿ.ಎನ್.ಪ್ರಕಾಶ್ ಇವರು ಸಲ್ಲಿಸಿರುವ ಹೇಳಿಕೆಯನುಸಾರ ಅವರು ರೂ.8.00 ಲಕ್ಷ ಅಂದಾಜು ಮೊತ್ತದಲ್ಲಿ ಮಿಟ್ಟಮಿನಿ ಕ್ಯಾಂಪ್, ಮಾನ್ವಿ ಇಲ್ಲಿ ಒಂದು ಕುಡಿಯುವ ನೀರಿನ ಕಾಮಗಾರಿಯನ್ನು ಅಂದಾಜು ಪಟ್ಟಿಯನುಸಾರ ಅನುಷ್ಠಾನಗೊಳಿಸಲಾಗಿದೆ ಎಂದು ತಿಳಿಸಿದ್ದು, ಸದರಿ ಕಾಮಗಾರಿಯನ್ನು ಟೆಂಡರ್ ಕರೆದು ನಿರ್ವಹಿಸಿರುವ ಬಗ್ಗೆ ಖಚಿತವಾಗಿ ತಿಳಿಸಿರುವುದಿಲ್ಲವೆಂದು ಇದರಿಂದಾಗಿ ಸದರಿ ಕಾಮಗಾರಿಯನ್ನು ನಿಯಮಗಳನ್ನು ಉಲ್ಲಂಘಿಸಿ, ತುಂಡುಗುತ್ತಿಗೆ ಮೇಲೆ ನಿರ್ವಹಿಸಿರುವುದು ಕಂಡು ಬರುತ್ತದೆ ಎಂದು ತಿಳಿಸಿರುತ್ತಾರೆ.

---2

ಶ್ರೀ ಕುಮಾರಸ್ವಾಮಿ, ಇವರು ಸಲ್ಲಿಸಿರುವ ವಿವರಣೆಯಲ್ಲಿ ಅವರು ದಿನಾಂಕ:13.3.2015 ರಿಂದ ಕರ್ತವ್ಯ ನಿರ್ವಹಿಸುತ್ತಿದ್ದು, ದೂರಿನಲ್ಲಿ ತಿಳಿಸಿರುವಂತೆ ಅವರ ಅವಧಿಯಲ್ಲಿ ಯಾವುದೇ ಕಾಮಗಾರಿಯು ನಿರ್ವಹಿಸಿರುವುದಿಲ್ಲವೆಂದು ತಿಳಿಸಿರುತ್ತಾರೆಂದು, ಮತ್ತೊಬ್ಬ ಆರೋಪಿತರಾದ ಶ್ರೀ ಪ್ರಲ್ಹಾದ್‌ರಾವ್ ಇವರು ಸಲ್ಲಿಸಿರುವ ವಿವರಣೆಯಲ್ಲಿ 5 ಕಾಮಗಾರಿಗಳನ್ನು ನಿರ್ವಹಿಸಲಾಗಿದ್ದು, ಅವುಗಳಲ್ಲಿ ನಾಲ್ಕು ಕಾಮಗಾರಿಗಳು 5.00 ಲಕ್ಷ ಮಿತಿಯೊಳಗೆ ಇದ್ದುದ್ದರಿಂದ ತುಂಡು ಗುತ್ತಿಗೆ ಮೇಲೆ ನಿರ್ವಹಿಸಲಾಗಿದೆ ಎಂದು, ಒಂದು ಕಾಮಗಾರಿ ಮೊತ್ತ 45.00 ಲಕ್ಷವಾದ್ದರಿಂದ ಟೆಂಡರ್ ಕರೆದು ಅನುಷ್ಠಾನಗೊಳಿಸಲಾಗಿದೆ ಎಂದು ತಿಳಿಸಿರುತ್ತಾರೆಂದು ತಿಳಿಸಲಾಗಿದೆ.

ಆರೋಪಿತರು ಸಲ್ಲಿಸಿರುವ ವಿವರಣೆಯೊಂದಿಗೆ ಕಾಮಗಾರಿಗಳು ಪ್ರಗತಿಯ ಛಾಯಾ ಚಿತ್ರಗಳು, ಅಳತೆ ಪುಸ್ತಕಗಳ ಪ್ರತಿ, ಸಾಮಗ್ರಿಗಳನ್ನು ಖರೀದಿಸಿದ ಬಿಲ್‌ಗಳ ಪ್ರತಿಗಳನ್ನು ಒದಗಿಸುವುದಿಲ್ಲವೆಂದು ಮಿಟ್ಟಿಮನಿ ಕ್ಯಾಂಪ್, ಮಾನ್ವಿ ಇಲ್ಲಿ ಒಂದು ಕುಡಿಯುವ ನೀರಿನ ಕಾಮಗಾರಿಯನ್ನು 8.00 ಲಕ್ಷ ಅಂದಾಜು ವೆಚ್ಚದಲ್ಲಿ ನಿರ್ವಹಿಸಿದ್ದು, ಟೆಂಡರ್ ಕರೆದಿರುವ ಬಗ್ಗೆ ಯಾವುದೇ ದಾಖಲೆಗಳನ್ನು ಸಲ್ಲಿಸಿರುವುದಿಲ್ಲವೆಂದು ಈ ಕಾರಣದಿಂದ ಆರೋಪಿತರ ವಿವರಣೆಯನ್ನು ಒಪ್ಪಿ ಶಿಸ್ತುನಡವಳಿಯನ್ನು ಕೈ ಬಿಡುವುದು ಸೂಕ್ತವಾಗುವುದಿಲ್ಲವೆಂದು ತಿಳಿಸಿರುತ್ತಾರೆ.

ಈ ರೀತಿಯಾಗಿ, ಶ್ರೀ ಜಿ.ಎನ್.ಪ್ರಕಾಶ್, ಸ.ಕಾ.ಇಂ ಮತ್ತು ಶ್ರೀ ಪ್ರಲ್ಹಾದ್‌ರಾವ್ ಕಿರಿಯ ಇಂಜಿನಿಯರ್ ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯದಲ್ಲಿ ಪೂರ್ಣ ಪ್ರಮಾಣದ ಕರ್ತವ್ಯ ನಿಷ್ಠೆ, ಪ್ರಾಮಾಣಿಕತೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿ, ಕ.ನಾ.ಸೇ (ನಡತೆ) ನಿಯಮಗಳು 1966 3(1)ನ್ನು ಉಲ್ಲಂಘಿಸಿರುತ್ತಾರೆಂದು, ಸದರಿಯವರ ವಿರುದ್ಧ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖೆ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪಲೋಕಾಯುಕ್ತ-1 ರವರು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ವರದಿ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿರುತ್ತದೆ. ಶ್ರೀ ಜಿ.ಎನ್. ಪ್ರಕಾಶ್ ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಕಚೇರಿಯಲ್ಲಿ ಕಾರ್ಯಪಾಲಕ ಇಂಜಿನಿಯರ್ ಹುದ್ದೆಯಲ್ಲಿ ಹೆಚ್ಚುವರಿ ಪ್ರಭಾರದಲ್ಲಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಮಿಟ್ಟಿಮನಿ ಕ್ಯಾಂಪ್, ಮಾನ್ವಿ ಇಲ್ಲಿ ರೂ. 8.00 ಲಕ್ಷ ಅಂದಾಜು ಮೊತ್ತದ ಕಾಮಗಾರಿಯನ್ನು ಪ್ರಾರಂಭಿಸಿರುವುದು ಕಂಡು ಬರುತ್ತದೆ. ನಿಯಮಾನುಸಾರ 5.00 ಲಕ್ಷ ಅಂದಾಜು ಮೊತ್ತ ಮೀರಿದ ಕಾಮಗಾರಿಗಳಿಗೆ ಕೆ.ಪಿ.ಟಿ.ಟಿ ಕಾಯ್ದೆಯನ್ವಯ ಟೆಂಡರ್ ಕರೆಯುವುದು ಕಡ್ಡಾಯವಾಗಿದ್ದರೂ, ಸದರಿ ಕಾಮಗಾರಿಗೆ ಟೆಂಡರ್ ಕರೆದಿರುವ ಬಗ್ಗೆ ಯಾವುದೇ ದಾಖಲೆಗಳನ್ನು ಸದರಿಯವರು ಒದಗಿಸಿರುವುದಿಲ್ಲ. ಇದರಿಂದಾಗಿ ಸದರಿ ಕಾಮಗಾರಿಯ ಅನುಷ್ಠಾನದಲ್ಲಿ ಕೆ.ಪಿ.ಟಿ.ಟಿ ನಿಯಮಗಳ ಉಲ್ಲಂಘನೆಯಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಶ್ರೀ ಪ್ರಲ್ಹಾದ್‌ರಾವ್ ಕಿರಿಯ ಇಂಜಿನಿಯರ್ ಇವರು 5 ಕಾಮಗಾರಿಗಳನ್ನು ಅವರ ಉಸ್ತುವಾರಿಯಲ್ಲಿ ನಿರ್ವಹಿಸಿರುವ ಬಗ್ಗೆ ಹೇಳಿಕೆಯಲ್ಲಿ ತಿಳಿಸಿದ್ದರೂ, ಸದರಿ ಕಾಮಗಾರಿಗಳ ಪ್ರಗತಿಯ ಮೂರು ಹಂತದ ಛಾಯಚಿತ್ರಗಳು, ಅಳತೆ ಪುಸ್ತಕಗಳ ಪ್ರತಿ, ಸಾಮಗ್ರಿಗಳನ್ನು ಖರೀದಿಸಿದ ಬಿಲ್‌ಗಳ ಪ್ರತಿಗಳನ್ನು ವಿವರಣೆಯೊಂದಿಗೆ ಒದಗಿಸದೇ ಇರುವುದು, ಕಾಮಗಾರಿಗಳನ್ನು ಸಮರ್ಪಕವಾಗಿ ಅಂದಾಜು ಪಟ್ಟಿಯನುಸಾರ ಅನುಷ್ಠಾನಗೊಳಿಸಿರುವುದು ಅನುಮಾನಸ್ಪದವಾಗಿರುತ್ತದೆ.

---3

ಇಬ್ಬರು ಅಪಾದಿತರು ಸರ್ಕಾರಿ ನೌಕರರರಾಗಿದ್ದು, ಅವರ ಕಾರ್ಯನಿರ್ವಹಣೆಯಲ್ಲಿ ಪೂರ್ಣ ಪ್ರಮಾಣದ ಕರ್ತವ್ಯ ನಿಷ್ಠೆ, ಪ್ರಾಮಾಣಿಕತೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿ. ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳಡಿ ಶಿಸ್ತುಕ್ರಮಕ್ಕೆ ಅರ್ಹರಾಗಿರುತ್ತಾರೆ. ಆದ್ದರಿಂದ ಸದರಿ ಇಬ್ಬರ ವಿರುದ್ಧ ಪ್ರಸ್ತುತ ಕಂಡು ಬಂದಿರುವ ಆರೋಪಗಳಿಗೆ ಸಂಬಂದಿಸಿದಂತೆ ವಿವರವಾದ ಇಲಾಖೆ ವಿಚಾರಣೆಯನ್ನು ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ:-

**<u>ಆದೇಶ ಸಂಖ್ಯೆ:ಗ್ರಾಅಪ 16 ಇಎನ್‌ಕ್ಯೂ 17, ಬೆಂಗಳೂರು, ದಿನಾಂಕ:21.4.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಜಿ.ಎನ್.ಪ್ರಕಾಶ್, ಹಿಂದಿನ ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಪ್ರಲ್ಹಾದ್‌ರಾವ್, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಮಾನ್ವಿ ಇವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ-14(ಎ) ರಂತೆ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 21/04/2017
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು,.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
8. ಸಂಬಂಧಿಸಿದ ಅಧಿಕಾರಿ/ನೌಕರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ರವರ ಮುಖಾಂತರ)
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
10. ಗ್ರಾ.ಅ.ಪಂ.ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್) /ಅಪರ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು